**All India Radio: Bangalore**
**Regional Bulletin In Kannada**
**09.03.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**09.03.2025 / 6.40 p.m.**
**<><><><>**

ಮುಖ್ಯಾಂಶಗಳು

1. ರಾಜ್ಯವನ್ನು ಮಾದಕ ದ್ರವ್ಯ ಮತ್ತು ಸೈಬರ್ ಅಪರಾಧದಿಂದ ಮುಕ್ತವಾಗಿಸಲು ರಾಜ್ಯಾದ್ಯಂತ ಇಂದು ಯಶಸ್ವಿ ಜಾಗೃತಿ ಮ್ಯಾರಾಥಾನ್
2. ರಾಜ್ಯದಲ್ಲಿ ವಿದೇಶಿ ಪ್ರವಾಸಿಗರ ರಕ್ಷಣೆಗೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಲಿದ್ದು, ಕಾನೂನು ಸುವ್ಯವಸ್ಥೆ ಕಾಪಾಡಲು ವಿಶೇಷ ಮುತುವರ್ಜಿ - ಗೃಹ ಸಚಿವ ಡಾ.ಜಿ.ಪರಮೇಶ್ವರ್
3. ಬನ್ನೇರುಘಟ್ಟ ಜೈವಿಕ ಉದ್ಯಾನದಲ್ಲಿ ಇತ್ತೀಚೆಗೆ ೭ ಹುಲಿ ಮರಿಗಳ ಜನನ ; ಶೀಘ್ರದಲ್ಲೇ ಪ್ರವಾಸಿಗರಿರ ವೀಕ್ಷಣೆಗೆ ಅವಕಾಶ
4. ರಾಜ್ಯದಲ್ಲಿ ಮೊದಲ ಮಳೆ ಮುಂದಿನ ವಾರ ಬೀಳುವ ನಿರೀಕ್ಷೆ ; ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ

<><><><>

ರಾಜ್ಯವನ್ನು ಮಾದಕ ದ್ರವ್ಯ ಮತ್ತು ಸೈಬರ್ ಅಪರಾಧದಿಂದ ಮುಕ್ತವಾಗಿಸಲು ಜಿಲ್ಲಾ ಕೇಂದ್ರಗಳಲ್ಲಿ ಇಂದು ಜನ-ಜಾಗೃತಿ ಮ್ಯಾರಾಥಾನ್ ಓಟ ಆಯೋಜಿಸಲಾಗಿತ್ತು. ಹಾಸನ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಸೈಬರ್ ಅಪರಾಧಗಳ ಬಗ್ಗೆ ಜಾಗೃತಿ, ಡ್ರಗ್ಸ್ ಫ್ರೀ ಕರ್ನಾಟಕ, ಫಿಟ್ನೆಸ್ ಫಾರ್ ಅಲ್ ಹಾಗೂ ಎಂಬ ಶೀರ್ಷಿಕೆಯಡಿಯಲ್ಲಿ ಇಂದು ಬೆಳಿಗ್ಗೆ ಹಾಸನ ನಗರದ ಡೇರಿ ಸರ್ಕಲ್‌ನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಆವರಣದಿಂದ ಪೊಲೀಸ್ ರನ್ ಮ್ಯಾರಾಥಾನ್ ನಡೆಯಿತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜಿತಾ ಅವರ ನೇತೃತ್ವದಲ್ಲಿ ನಡೆದ ಮ್ಯಾರಾಥಾನ್‌ನಲ್ಲಿ ಸಾವಿರಾರು ಸಂಖ್ಯೆಯಲ್ಲಿ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿಗಳು, ಶಾಲಾ ಕಾಲೇಜು ವಿದ್ಯಾರ್ಥಿಗಳು, ಹಾಗೂ ಸಾರ್ವಜನಿಕರು ಭಾಗವಹಿಸಿ ಗಮನ ಸೆಳೆದರು. ಮಾದಕ ದ್ರವ್ಯ ಮುಕ್ತ ಕರ್ನಾಟಕ ಮಾಡುವ ಉದ್ದೇಶದಿಂದ ವಿದ್ಯಾರ್ಥಿಗಳಿಗೆ ಪ್ರತಿಜ್ಞಾ ವಿಧಿಯನ್ನು ಭೋದಿಸುವ ಮೂಲಕ ಚಿತ್ರದುರ್ಗ ಜಿಲ್ಲಾ ವರಿಷ್ಠಾಧಿಕಾರಿ ರಣಜಿತ್ ಭಂಢಾರು ಮ್ಯಾರಥಾನ್‌ಗೆ

ಚಾಲನೆ ನೀಡಿದರು. ಚಿತ್ರದುರ್ಗ ಜಿಲ್ಲಾ ಪೊಲೀಸ್ ಮತ್ತು ಎಸ್‌ಬಿಐ ಬ್ಯಾಂಕ್ ಸಹಯೋಗದಲ್ಲಿ ನಮ್ಮ ಪೊಲೀಸ್ ನಮ್ಮ ಹೆಮ್ಮೆ, ಫಿಟ್‌ನೆಸ್ ಫಾರ್ ಆಲ್ ಮತ್ತು ಡ್ರಗ್ಸ್ ಫ್ರೀ ಕರ್ನಾಟಕ ಎಂಬ ಘೋಷವಾಕ್ಯಗಳೊಂದಿಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಸಾರ್ವಜನಿಕರಿಗೆ ೫ ಮತ್ತು ೧೦ ಕಿಲೋ ಮೀಟರ್‌ಗಳ ಮ್ಯಾರಥಾನ್ ಓಟ ಆಯೋಜಿಸಲಾಗಿತ್ತು. ಮ್ಯಾರಥಾನ್‌ನಲ್ಲಿ ವಿದ್ಯಾರ್ಥಿಗಳು ಹಿರಿಯ ಸಾರ್ವಜನಿಕರು ಸೇರಿ ಸುಮಾರು ೧೫೦೦ಕ್ಕೂ ಹೆಚ್ಚು ಮಂದಿ ಸಕ್ರಿಯವಾಗಿ ಪಾಲ್ಗೊಂಡಿದ್ದರು. ವಿಜೇತರಿಗೆ ಬಹುಮಾನ ವಿತರಿಸಿದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರೋಣ್ ವಾಸುದೇವ ಮಾತನಾಡಿ, ದೈಹಿಕ ಹಾಗೂ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳುವ ಈ ರೀತಿಯ ಕಾರ್ಯಕ್ರಮಗಳು ಆಗಾಗ್ಗೆ ನಡೆಯುತ್ತಿರಬೇಕು ಎಂದರು. ಕಾರವಾರ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ನೇತೃತ್ವದಲ್ಲಿ ಉತ್ತರ ಕನ್ನಡ ಜಿಲ್ಲೆಯನ್ನು ಮಾದಕ ದ್ರವ್ಯ ಹಾಗೂ ಸೈಬರ್ ಅಪರಾಧ ಮುಕ್ತ ಜಿಲ್ಲೆಯನ್ನಾಗಿ ಮಾಡಲು ಪ್ರಯತ್ನಿಸುತ್ತಿದ್ದು ಮುಂದಿನ ದಿನದಲ್ಲಿ ಈ ಕಾರ್ಯಕ್ಕೆ ಯಶಸ್ಸು ಖಚಿತವಾಗಿ ದೊರೆಯಲಿದೆ ಎಂದು ಕರ್ನಾಟಕ ರಾಜ್ಯ ಮಾರ್ಕೇಟಿಂಗ್ ಕನ್ಸಲೆಂಟ್ ಅಂಡ್ ಏಜೆನ್ಸಿಸ್ ಅಧ್ಯಕ್ಷ ಹಾಗೂ ಕಾರವಾರ ವಿಧಾನಸಭಾ ಕ್ಷೇತ್ರದ ಶಾಸಕ ಸತೀಶ ಸೈಲ್ ಹೇಳಿದರು. ಉತ್ತರಕನ್ನಡ ಜಿಲ್ಲಾ ಪೊಲೀಸ್ ವತಿಯಿಂದ ಕಾರವಾರ ರವೀಂದ್ರನಾಥ ಟಾಗೋರ ಕಡಲ ತೀರದಲ್ಲಿ ಮಾದಕ ದ್ರವ್ಯ ಹಾಗೂ ಸೈಬರ್ ಅಪರಾಧ ಮುಕ್ತ ಕರ್ನಾಟಕ ೨೦೨೫ರ ಮ್ಯಾರಾಥಾನ್ ಓಟಕ್ಕೆ ಚಾಲನೆ ನೀಡಿ ಮಾತನಾಡಿದರು. ಮ್ಯಾರಥಾನ್ ಓಟದ ಸ್ಪರ್ಧೆಯಲ್ಲಿ ಉತ್ಸಹಕರಾಗಿ ೧ ಸಾವಿರಕ್ಕೂ ಅಧಿಕ ಜನರು ನೋಂದಣಿ ಮಾಡಿಕೊಂಡು ಸ್ಪರ್ಧೆಯಲ್ಲಿ ಭಾಗವಹಿಸಿರುವುದನ್ನು ಕಂಡು ಹರ್ಷ ವ್ಯಕ್ತ ಪಡಿಸಿ ಎಲ್ಲರಿಗೂ ಶುಭ ಕೋರಿದರು. ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಾರಾಯಣ.ಎಂ ಮಾತನಾಡಿ, ವಿದ್ಯಾರ್ಥಿಗಳು ಜಾಗೃತರಾಗಿದ್ದು, ಮಾದಕ ವಸ್ತುಗಳ ಸೇವನೆ ಮಾಡದೇ ಉತ್ತಮ ಅರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದರು. ಮಾದಕವಸ್ತುಗಳ ಮತ್ತು ಸಂಚಾರ ನಿಯಮಗಳ ಬಗ್ಗೆ ನಿರಂತರವಾಗಿ ಪೊಲೀಸ್ ಇಲಾಖೆ ಹಾಗೂ ಜಿಲ್ಲಾಡಳಿತದಿಂದ ಜನಜಾಗೃತಿ ಮೂಡಿಸಲಾಗುತ್ತಿದೆ. ಅವಳಿನಗರ ಅಪರಾಧ ಮುಕ್ತವಾಗಿ ಮಾಡಲು ಪೊಲೀಸ ಮತ್ತು ಜಿಲ್ಲಾಡಳಿತದೊಂದಿಗೆ ಯುವಸಮೂಹ ಕೈ ಜೋಡಿಸಬೇಕು ಮತ್ತು ಸಹಕಾರ ನೀಡಬೇಕೆಂದು ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದ್ದಾರೆ. ಹುಬ್ಬಳ್ಳಿಯ

ಮಹಾನಗರ ಪೊಲೀಸ್ ಆಯುಕ್ತಾಲಯ ಹಾಗೂ ಜಿಲ್ಲಾ ಪೊಲೀಸ್ ಇಲಾಖೆ ಸಂಯುಕ್ತವಾಗಿ ಆಯೋಜಿಸಿದ್ದ ಡ್ರಗ್ಸ್, ಅಪರಾಧ ಮುಕ್ತ ನಗರವಾಗಿ ಮಹಾನಗರ ಸೇರಿದಂತೆ ಧಾರವಾಡ ಜಿಲ್ಲೆ ರೂಪಿಸಲು ಹಮ್ಮಿಕೊಂಡಿದ್ದ ಪೊಲೀಸ್ ಹಾಗೂ ನಾಗರಿಕರಿಂದ ಕೂಡಿದ್ದ ಪೊಲೀಸ್ ರನ್-೨೦೨೫ ಮ್ಯಾರಾಥನ್ ಚಾಲನಾ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು.

<><><>

ರಾಜ್ಯದಲ್ಲಿ ವಿದೇಶಿ ಪ್ರವಾಸಿಗರ ರಕ್ಷಣೆಗೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಲಿದ್ದು, ಕಾನೂನು ಸುವ್ಯವಸ್ಥೆ ಕಾಪಾಡಲು ವಿಶೇಷ ಮುತುವರ್ಜಿ ವಹಿಸಲಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತುಂಗಭದ್ರಾ ನದಿ ಪಾತ್ರದ ಹೋಂ ಸ್ಟೇ ಬಳಿ ನಡೆದ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಇಬ್ಬರು ಗಂಗಾವತಿ ಮೂಲದ ಆರೋಪಿಗಳನ್ನು ಬಂಧಿಸಿದ್ದು, ಮೂರನೇ ಆರೋಪಿ ಬಂಧನಕ್ಕೆ ಪೊಲೀಸರು ವ್ಯಾಪಕ ಜಾಲ ಬೀಸಿದ್ದಾರೆ. ಇದೊಂದು ದುರದೃಷ್ಟಕರ ಘಟನೆ. ಆರೋಪಿಗಳನ್ನು ವಿಚಾರಣೆಗೆ ಒಳಪಡಿಸಿದ್ದು, ಉನ್ನತ ಪೊಲೀಸ್ ಅಧಿಕಾರಿಗಳ ನೇತೃತ್ವದಲ್ಲಿ ತನಿಖೆ ಮುಂದುವರಿದಿದೆ ಎಂದು ಹೇಳಿದರು. ಅನಧಿಕೃತವಾಗಿ ಹೋಂಸ್ಟೆ ನಡೆಸುತ್ತಿದ್ದರೆ, ಅಂತಹವರ ಮೇಲೂ ಕಾನೂನು ರೀತಿ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದರು.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ವಿಜಯಪುರ ಹೋಬಳಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್ ಮುನಿಯಪ್ಪ ಇಂದು ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಸಚಿವರು, ಜಿಲ್ಲೆಯಲ್ಲಿ ಹಲವಾರು ಅಭಿವೃದ್ಧಿ ಕಾರ್ಯಕ್ರಮಗಳಾಗುತ್ತಿದ್ದು, ರಸ್ತೆ, ಚರಂಡಿ, ನೀರಿನ ಸೌಕರ್ಯ ಮೊದಲಾದ ಮೂಲ ಸೌಕರ್ಯಗಳಿಗೆ ಆದ್ಯತೆ ನೀಡಲಾಗುತ್ತಿದೆ. ಸರ್ಕಾರ ಡಿಸಿಸಿ ಬ್ಯಾಂಕ್ ಗಳಲ್ಲಿ ಬಡ್ಡಿ ರಹಿತ ಸಾಲ ನೀಡುವ ಯೋಜನೆ ಜಾರಿಗೆ ತಂದಿದ್ದು ರೈತರು, ಸ್ವಸಹಾಯ, ಸ್ತ್ರೀ ಶಕ್ತಿ ಸಂಘಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

<><><>

ಬನ್ನೇರುಘಟ್ಟ ಜೈವಿಕ ಉದ್ಯಾನದಲ್ಲಿ ಇತ್ತೀಚೆಗೆ ಎರಡು ಹುಲಿಗಳು ಒಟ್ಟು ೬ ಮರಿಗಳಿಗೆ ಜನ್ಮ ನೀಡಿವೆ. ಆರು ವರ್ಷದ ಹಿಮಾ ಹುಲಿ, ನಾಲ್ಕು ಮರಿಗಳಿಗೆ ಜನ್ಮ ನೀಡಿದೆ. ೮ ವರ್ಷದ ಅರುಣ್ಯ ಇದೇ ಮೊದಲ ಬಾರಿಗೆ ಎರಡು ಮರಿಗಳಿಗೆ ಜನ್ಮ ನೀಡಿದೆ. ಈ ನೂತನ ಚಿಣ್ಣರ ಬಗ್ಗೆ ಜೈವಿಕ ಉದ್ಯಾನದ ಕಾರ್ಯ ನಿರ್ವಾಹಕ ನಿರ್ದೇಶಕ ಸೂರ್ಯಸೇನ, ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡಿದ್ದಾರೆ.

**ಧ್ವನಿ : ನಿರ್ದೇಶಕ ಸೂರ್ಯಸೇನ**

<><><><>

ರಾಜ್ಯದ ಕೆಲವೆಡೆ ಪೂರ್ವ ಮುಂಗಾರು ಮಳೆ ಮುಂದಿನ ವಾರ ಬೀಳುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ರಾಜ್ಯದ ಪ್ರಸ್ತುತ ಹವಾಮಾನ ಪರಿಸ್ಥಿತಿ ಬಗ್ಗೆ ಭಾರತೀಯ ಹವಾಮಾನ ಇಲಾಖೆ ವಿಜ್ಞಾನಿ ಹಾಗೂ ನಿರ್ದೇಶಕ ಸಿ.ಎಸ್. ಪಾಟೀಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**ಧ್ವನಿ: ವಿಜ್ಞಾನಿ, ನಿರ್ದೇಶಕ ಸಿ.ಎಸ್.ಪಾಟೀಲ್ (೪೦ ಸೆಕೆಂಡ್‌ಗಳು)**

<><><><>

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕುವೆಂಪು ಭಾಷಾ ಭಾರತಿ ವತಿಯಿಂದ ಚಿತ್ರದುರ್ಗದಲ್ಲಿಂದು ಹಮ್ಮಿಕೊಂಡಿದ್ದ ೨೦೨೩-೨೪ನೇ ಸಾಲಿನ ಗೌರವ ಪ್ರಶಸ್ತಿ ಹಾಗೂ ೨೦೨೨-೨೩ನೇ ಸಾಲಿನ ಪುಸ್ತಕ ಬಹುಮಾನ ವಿತರಣಾ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಚಾಲನೆ ನೀಡಿದ್ದಾರೆ. ಬಳಿಕ ಅವರು ಮಾತನಾಡಿ, ಬಹು ಸಂಸ್ಕೃತಿ ಎನ್ನುವುದು ಕಾಲ ಮತ್ತು ದೇಶಗಳನ್ನು ಮೀರಿದ ವಾಸ್ತವ. ಸಂಸ್ಕೃತಿಗಳ ನಡುವೆ ಹಿಂದಿನ ಕಾಲದಲ್ಲಿ ಸಂಘರ್ಷಗಳು ಇದ್ದವು. ಈಗ ನಾವು ಅನುಸಂಧಾನದ ಕಾಲದಲ್ಲಿದ್ದೇವೆ. ಸಂಸ್ಕೃತಿಗಳ ನಡುವೆ ಸಂವಾದ, ಸಂವಹನ ಏರ್ಪಟ್ಟಾಗ ಅವುಗಳನ್ನು ಅರ್ಥಮಾಡಿಕೊಳ್ಳಲು ಸಾಧ್ಯ ಎಂದರು. ಈ ವೇಳೆ ಪ್ರಶಸ್ತಿ ಪುರಸ್ಕೃತರ ಕೈಪಿಡಿ ಬಿಡುಗಡೆ ಮಾಡಿ, ಸಾಧಕರನ್ನು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಸಾಹಿತಿ ಡಾ. ಕೆ. ಮರುಳಸಿದ್ದಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

<><><><>

ರಾಮನಗರ ಜಿಲ್ಲಾ ನ್ಯಾಯಾಲಯ ಸೇರಿದಂತೆ ತಾಲೂಕುಗಳ ನ್ಯಾಯಾಲಯಗಳು ಸೇರಿ ಜಿಲ್ಲೆಯಲ್ಲಿ ನಿನ್ನೆ ನಡೆದ ಲೋಕ್ ಅದಾಲತ್‌ನಲ್ಲಿ ಒಟ್ಟಾರೆ ೩ ಸಾವಿರದ ೯೦೬ ಬಾಕಿ ಇರುವ

ಪ್ರಕರಣಗಳು ಹಾಗೂ ೧ ಲಕ್ಷದ ೨೮ ಸಾವಿರದ ೮೮ ವ್ಯಾಜ್ಯ ಪೂರ್ವ ಪ್ರಕರಣಗಳು ಇತ್ಯರ್ಥಗೊಂಡಿವೆ. ರಾಮನಗರದ ಜಿಲ್ಲಾ ನ್ಯಾಯಾಲಯದಲ್ಲಿ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಲೋಕ್ ಅದಾಲತ್ ನಲ್ಲಿ ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶರಾದ ರೇಣುಕಾ ಬಿ.ವಿ. ಪ್ರಕರಣಗಳ ವಿಚಾರಣೆ ನಡೆಸಿದರು.

<><><><>

ಸಂಕ್ಷಿಪ್ತ ಸುದ್ದಿಗಳು

1. ಮಕ್ಕಳ ಕ್ರಿಯಾಶೀಲತೆ, ಸೃಜನಶೀಲತೆ ಇರುವುದು ಮಣ್ಣಿನಲ್ಲೇ ಹೊರತು ಮೊಬೈಲ್ ನಲ್ಲಿ ಅಲ್ಲ. ಬಾಲ ಭವನ ಪ್ರತಿಭೆ ಹೊರಗೆ ತರುವ ವೇದಿಕೆಯಾಗಿದೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಗೆಗಾರ ಕೆ.ವಿ.ಪ್ರಭಾಕರ್ ಕೊಪ್ಪಳದಲ್ಲಿಂದು ನುಡಿದರು.
2. ರಾಜ್ಯ ಸರ್ಕಾರವು ಯುವಕರ ಉದ್ಯೋಗಕ್ಕೆ ಆದ್ಯತೆ ನೀಡಿದೆ. ನಿರುದ್ಯೋಗಿ ಯುವಕರಿಗೆ ಆರ್ಥಿಕ ಭದ್ರತೆ ಹಾಗೂ ಕೌಶಲ್ಯ ಹೆಚ್ಚಳ ಹಾಗೂ ಯುವನಿಧಿ ಗ್ಯಾರಂಟಿ ಯೋಜನೆ ಮೂಲಕ ಪ್ರತಿ ತಿಂಗಳು ನಿರ್ಧಿಷ್ಟ ಅವಧಿಗೆ ಆರ್ಥಿಕ ಸಹಾಯ ಮಾಡಲಾಗುತ್ತಿದೆ ಎಂದು ಹಿರಿಯ ಶಾಸಕ ಎನ್.ಎಚ್.ಕೋನರಡ್ಡಿ ಧಾರವಾಡದಲ್ಲಿಂದು ಹೇಳಿದ್ದಾರೆ.
3. ಹಾವೇರಿ ಜಿಲ್ಲೆಯಲ್ಲಿರುವ ಜನರಿಗೆ ಆರೋಗ್ಯ ಸೇವೆ ಒದಗಿಸುತ್ತಿರುವ ಕ್ಲಿನಿಕ್‌ಗಳು ನೋಂದಣಿ ಮಾಡಿಸಿ ಪರವಾನಗಿ ಪಡೆಯುವುದು ಕಡ್ಡಾಯವಾಗಿದ್ದು, ಇದುವರೆಗೂ ಪರವಾನಗಿ ಪಡೆಯದ ೩೪ ಕ್ಲಿನಿಕ್‌ಗಳಿಗೆ ನೋಟಿಸ್ ಜಾರಿ ಮಾಡಲಾಗಿದೆ ಎಂದು ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ದೇವರಾಜ್ ಎಸ್. ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>